ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಶಿವಮೊಗ್ಗ ಗ್ರಾಮಾಂತರ ವಿಧಾನ ಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ 2 ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ 9 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಆ) ಈ ಆರೋಗ್ಯ ಕೇಂದ್ರಗಳಲ್ಲಿ 19 ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದ್ದು, 13 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 6 ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇವೆ.

156 ಇತರೆ ಸಿಬ್ಬಂದಿಗಳ ಹುದ್ದೆಗಳು ಮಂಜೂರಾಗಿದ್ದು, 129 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 27 ಹುದ್ದೆಗಳು ಖಾಲಿ ಇವೆ.

ಇ) 1) ಕುಂಸಿ 2) ಹರಮಘಟ್ಟ 3) ಅರೆಬಿಳಚಿ ಈ 3 ಪ್ರಾಥಮಿಕ ಕೇಂದ್ರಗಳಲ್ಲಿ ತಲಾ ಒಂದು ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇವೆ.

ಈ) ವೈದ್ಯಾಧಿಕಾರಿಗಳ ಹುದ್ದೆಗಳು ಹಾಗೂ ಇತರೆ ಸಿಬ್ಬಂದಿಗಳ ಹುದ್ದೆಗಳು ಆಗಿಂದಾಗ್ಗೆ ವಯೋನಿವೃತ್ತಿ, ವರ್ಗಾವಣೆ ಮತ್ತು ಪದೋನ್ನತಿ ಯಿಂದ ತೆರವಾದ ಹುದ್ದೆಗಳಾಗಿವೆ.

ಶಿವಮೊಗ್ಗ ಜಿಲ್ಲೆಯ ಮೆಗ್ಗಾನ್ ಆಸ್ಪತ್ರೆಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವೈದ್ಯರು / ಸಿಬ್ಬಂದಿ ವರ್ಗದವರು ನಿಯೋಜನೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದು, ಅವರ ಸೇವೆಯನ್ನು ಹಂತ-ಹಂತವಾಗಿ ಹಿಂಪಡೆಯಲು ಕ್ರಮವಹಿಸಲಾಗುವುದು.

'ಆಶಾ' ಯೋಜನೆ ಅನುಷ್ಠಾನ

414 (95) ಶ್ರೀ ಕುಮಾರಸ್ವಾಮಿ ಕೆ.ಜಿ (ಶಿವಮೊಗ್ಗ ಗ್ರಾಮಾಂತರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಗ್ರಾಮೀಣ ಜನತೆಗೆ ಸಣ್ಣಪುಟ್ಟ ಕಾಯಿಲೆಗಳಿಗೆ ವೈದ್ಯರು ಗ್ರಾಮಗಳಿಗೆ ತೆರಳಿ ಉಪಚರಿಸುವ 'ಆಶಾ ಯೋಜನೆ' ಜಾರಿಗೆ ತರಲಾಗಿದೆ; ಕಳೆದ 3 ವರ್ಷಗಳಿಂದ ಈ ಯೋಜನೆಗಾಗಿ ಮಾಡಲಾದ ವೆಚ್ಚವೆಷ್ಟು;

ಆ) ಶಿವಮೊಗ್ಗ ಗ್ರಾಮಾಂತರ ಕ್ಷೇತ್ರದಲ್ಲಿ ಶಿವಮೊಗ್ಗ ಮತ್ತು ಭದ್ರಾವತಿ ತಾಲ್ಲೂಕುಗಳ ಯಾವ ಗ್ರಾಮಗಳಲ್ಲಿ ಈ ಯೋಜನೆಯಡಿ

ರೋಗಿಗಳನ್ನು ಉಪಚರಿಸಲಾಗಿದೆ; ಗ್ರಾಮವಾರು ರೋಗಿಗಳ ಸಂಖ್ಯೆ ಹಾಗೂ ಮಾಡಲಾದ ವೆಚ್ಚವೆಷ್ಟು (ವಿವರ ನೀಡುವುದು)?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ರಾಜ್ಯದ ಒಟ್ಟು 30 ಜಿಲ್ಲೆಗಳಲ್ಲಿ ಆಶಾ ಯೋಜನೆಯನ್ನು ಜಾರಿಗೆ ತರಲಾಗಿದೆ.

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಈ ಯೋಜನೆಗೆ ಒಟ್ಟು ರೂ. 59.62 ಕೋಟಿಗಳು ವೆಚ್ಚವಾಗಿದೆ.

ಆ) ಶಿವಮೊಗ್ಗ ಜಿಲ್ಲೆಯಲ್ಲಿ ಆಶಾ ಯೋಜನೆಯನ್ನು 1–12–2009 ರಿಂದ ಪ್ರಾರಂಭ ಮಾಡಲಾಗಿದೆ. ಈ ಯೋಜನೆಯಡಿ ತರಬೇತಿ ಹೊಂದಿದ ಪ್ರತಿಯೊಬ್ಬ ಆಶಾ ಕಾರ್ಯಕರ್ತೆಯರಿಗೆ ಒಂದು ವೈದ್ಯಕೀಯ ಕಿಟ್‌ನ್ನು ಒದಗಿಸಲಾಗುವುದು. ಕಾರ್ಯಕರ್ತೆಯರು ಗ್ರಾಮೀಣ ಪ್ರದೇಶಗಳಿಗೆ ತೆರಳಿ ಸಣ್ಣ ಪುಟ್ಟ ಚಿಕಿತ್ಸೆ ನೀಡುವುದು, ಸಾಮಾನ್ಯ ಹೆರಿಗೆ ಮಾಡಿಸುವುದು, ತೊಂದರೆದಾಯಕ ಹೆರಿಗೆಗಳನ್ನು ಗುರುತಿಸಿ ಆಸ್ಪತ್ರೆಗಳಿಗೆ ಕೊಂಡೊಯ್ಯುವುದು ಹಾಗೂ ಸಮಗ್ರ ಆರೋಗ್ಯ ಶಿಕ್ಷಣ ಪಾಲನೆಯಲ್ಲಿ ಸಕ್ರಿಯವಾಗಿ ಭಾಗವಹಿಸುವುದು ಇತ್ಯಾದಿ ಕರ್ತವ್ಯ ನಿರ್ವಹಿಸುವರು. ಇಲ್ಲಿಯವರೆಗೆ ಸೊರಬ, ಶಿಕಾರಿಪುರ, ತೀರ್ಥಹಳ್ಳಿ, ಹೊಸನಗರ ತಾಲ್ಲೂಕುಗಳಲ್ಲಿ ಒಟ್ಟು 238 ಆಶಾ ಕಾರ್ಯಕರ್ತೆಯರಿಗೆ ತರಬೇತಿ ನೀಡಲಾಗಿದೆ.

ಶಿವಮೊಗ್ಗ ಮತ್ತು ಭದ್ರಾವತಿ ತಾಲ್ಲೂಕುಗಳಲ್ಲಿ ಕ್ರಮವಾಗಿ 200 ಮತ್ತು 215 ಆಶಾ ಕಾರ್ಯಕರ್ತೆಯರಿಗೆ ತರಬೇತಿ ನೀಡಲು ಗುರಿ ಹೊಂದಲಾಗಿದ್ದು, ಮುಂದಿನ ತಂಡಗಳಲ್ಲಿ ತರಬೇತಿ ನೀಡಲಾಗುತ್ತದೆ. ಆದುದರಿಂದ ಈ ಎರಡು ತಾಲ್ಲೂಕುಗಳಲ್ಲಿ ಈವರೆಗೆ ವೆಚ್ಚವಾಗಿರುವುದಿಲ್ಲ.

NHRM ಯೋಜನೆಯಡಿ ಸಾರ್ವಜನಿಕ ಆರೋಗ್ಯಕ್ಕೆ ಸಂಬಂಧಿಸಿದಂತೆ NGO/ಸ್ವಯಂ ಸೇವಾ ಸಂಸ್ಥೆಗಳ ಪಾತ್ರ

415 (96) ಶ್ರೀ ಕುಮಾರಸ್ವಾಮಿ ಕೆ.ಜಿ. (ಶಿವಮೊಗ್ಗ ಗ್ರಾಮಾಂತರ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?